ಈ) ಶೀಘ್ರವಾಗಿ ವಿಚಾರಣೆ ನಡೆಸಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

ಹೋರಿ ಬೆದರಿಸುವ ಕಾರ್ಯಕ್ರಮಗಳನ್ನು ನಿಯಂತ್ರಿಸುವುದು

24(139); ಶ್ರೀ ಬಣಕಾರ್ ಯು.ಬಿ. (ಹಿರೇಕೆರೂರು)

ಅ) ಪ್ರಾಣಿಗಳಿಗೆ, ಮಾವನರಿಗೆ ಹಿಂಸೆ ಆಗುವಂತಹ ಹೋರಿ ಬೆದರಿಸುವ ಕಾರ್ಯಕ್ರಮಗಳು ಪೊಲೀಸ್ ಇಲಾಖೆಯ ಅನುಮತಿ ಇಲ್ಲದೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಇದನ್ನು ಕಾನೂನು ಬದ್ದವಾಗಿ ನಿಯಂತ್ರಿಸುವ ಬಗ್ಗೆ ಕ್ರಮ ತೆಗೆದುಕೊಳ್ಳಲಾಗುವುದೇ?

ಶ್ರೀ ಕೆ.ಜೆ. ಜಾರ್ಜ್ (ಗೃಹ ಸಚಿವರು)

ಅ) ಇಲ್ಲ

ಆ) ಪೊಲೀಸ್ ಇಲಾಖೆಯ ಅನುಮತಿ ಪಡೆಯದೇ ಕಾನೂನು ಬಾಹಿರವಾಗಿ ಹೋರಿ ಬೆದರಿಸುವ ಕಾರ್ಯಕ್ರಮಗಳು ನಡೆದಲ್ಲಿ ಸಂಬಂಧಪಟ್ಟ ಕಾರ್ಯಕ್ರಮ ಆಯೋಜಕರ ಮೇಲೆ ಪ್ರಾಣಿ ಹಿಂಸೆ ನಿಷೇಧ ಕಾಯ್ದೆಯಡಿ ಮತ್ತು ಇತರೆ ಕಾನೂನು ರೀತ್ಯಾ ಕ್ರಮ ಜರುಗಿಸಲಾಗುವುದು.

ಮೇಲ್ಸೇತುವೆ ನಿರ್ಮಾಣ

25(183); ಶ್ರೀ ಬಸವರಾಜ್ ಬಿ.ಎ. (ಕೆ.ಆರ್. ಪುರಂ)

ಅ) ಕೆ.ಆರ್.ಪುರ ಕ್ಷೇತ್ರದ ವ್ಯಾಪ್ತಿಯಲ್ಲಿ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿ–4 ರಲ್ಲಿ ಸಂಚಾರ ದಟ್ಟಣೆ ಹೆಚ್ಚಾಗಿ ಸಾರ್ವಜನಿಕರಿಗೆ ಅನಾನುಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಆ) ಹಾಗಿದ್ದಲ್ಲಿ, ಇದನ್ನು ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು (ವಿವರ ನೀಡುವುದು)

ಇ) ಸಂಚಾರ ದಟ್ಟಣೆ ನಿಯಂತ್ರಿಸಲು ಬೆನ್ನಿಗಾನಹಳ್ಳಿ – ಮೇಡನಹಳ್ಳಿವರೆವಿಗೂ ಮೇಲ್ಸೇತುವೆ ನಿರ್ಮಾಣ ಕಾಮಗಾರಿ ಕೈಗೊಳ್ಳುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಈ) ಈ ಮೇಲ್ಸೇತುವೆ ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮಗಳೇನು (ವಿವರ ನೀಡುವುದು)?

ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಯವರು)

ಅ) ಬಂದಿದೆ.

ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಬೆನ್ನಿಗಾನಹಳ್ಳಿ ರೈಲ್ವೆ ಸೇತುವೆಯಿಂದ (0.00 ಕಿಮಿ) ರಾಷ್ಟ್ರೀಯ ಹೆದ್ದಾರಿ–4 ರ ಕೆ.ಆರ್.ಪುರಂ ಟೋಲ್ ರಸ್ತೆ (ಬಿ.ಬಿ.ಎಂ.ಪಿ ಗಡಿ) ವರೆಗಿನ ಸುಮಾರು 4.10 ಕಿ.ಮೀ ಉದ್ದದ ರಸ್ತೆಯು ಹಾಳಾಗಿದ್ದು, ವಾಹನಗಳ ಸುಗಮ ಸಂಚಾರಕ್ಕೆ ಅಡಚಣೆಯಾಗುತ್ತಿದ್ದ ಹಿನ್ನೆಲೆಯಲ್ಲಿ ಸದರಿ ಭಾಗದ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದ್ದು, ಸದರಿ ರಸ್ತೆಯಲ್ಲಿ ಲಭ್ಯವಿರುವ ಜಾಗಗಳಲ್ಲಿ ಸುಮಾರು 1 ರಿಂದ 6 ಮೀ ರಷ್ಟು ರಸ್ತೆ ಅಗಲೀಕರಣ ಮಾಡಿ ಮತ್ತು ಮರು ಡಾಂಬರೀಕರಣ ಮಾಡಿ ವಾಹನಗಳ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲಾಗಿದೆ.

ಇ) ಬೆನ್ನಿಗಾನಹಳ್ಳಿ–ಮೇಡಹಳ್ಳಿವರೆವಿಗೂ ಮೇಲ್ಸೇತುವೆ ನಿರ್ಮಾಣ ಯೋಜನೆಯನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆವತಿಯಿಂದ ಕೈಗೆತ್ತಿಕೊಂಡಿರುವುದಿಲ್ಲ

ಈ) ಅನ್ವಯಿಸುವುದಿಲ್ಲ